**ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪ 708 ಗ್ರಾಪಂಅ 2015

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:28-10-2016

ಇಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
ಬೆಂಗಳೂರು.

ಇವರಿಗೆ:

ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು,

ಮಾನ್ಯರೆ,

ವಿಷಯ: ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಮಕ್ಕಳ ಗ್ರಾಮ ಸಭೆಗಳನ್ನು ನಡೆಸುವ ಬಗ್ಗೆ.

ಉಲ್ಲೇಖ:
1. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 1993ರ ಪ್ರಕರಣ 3(ಎ).
2. ಕರ್ನಾಟಕ ಪಂಚಾಯತ್ ರಾಜ್ (ವಾರ್ಡ್‌ಸಭೆ ಮತ್ತು ಗ್ರಾಮಸಭೆ) ನಿಯಮಗಳು 2004.
3. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 367 ಗ್ರಾಪಂಅ 2006 ದಿ:18-09-2006.
4. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 108 ಗ್ರಾಪಂಅ 2007 ದಿ:30-10-2007.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖದ ಪತ್ರಗಳ ಕಡೆಗೆ ತಮ್ಮ ಗಮನ ಸೆಳೆಯಲಾಗಿದೆ. ಉಲ್ಲೇಖ (3)ರ ಸರ್ಕಾರದ ಸುತ್ತೋಲೆಯಲ್ಲಿ ಮಕ್ಕಳ ಹಕ್ಕುಗಳ ಬಗ್ಗೆ ಚರ್ಚಿಸಲು ಪ್ರತಿ ವರ್ಷ ನವೆಂಬರ್ ತಿಂಗಳಿನಲ್ಲಿ ಮಕ್ಕಳ ಗ್ರಾಮ ಸಭೆಗಳನ್ನು ನಡೆಸುವ ಬಗ್ಗೆ ವಿಸ್ತೃತವಾದ ಮಾರ್ಗಸೂಚಿ ಹೊರಡಿಸಲಾಗಿದೆ (ಪ್ರತಿ ಲಗತ್ತಿಸಿದೆ).

ಉಲ್ಲೇಖದ ಪತ್ರಗಳನ್ನು ಮುಂದುವರೆಸುತ್ತಾ, 2016-17ನೇ ಸಾಲಿನಲ್ಲಿಯೂ ನವೆಂಬರ್ ಮಾಹೆಯಲ್ಲಿ ಉಲ್ಲೇಖ (3)ರ ಸರ್ಕಾರದ ಸುತ್ತೋಲೆಯಲ್ಲಿ ತಿಳಿಸಿರುವ ರೀತ್ಯಾ ಮಕ್ಕಳ ಗ್ರಾಮ ಸಭೆಗಳನ್ನು ನಡೆಸಲು ತಿಳಿಸಲಾಗಿದೆ. ಮಕ್ಕಳು ಭವಿಷ್ಯದ ಪ್ರಜೆಗಳಾಗಿದ್ದು, ಮಕ್ಕಳ ಹಕ್ಕುಗಳ ಬಗ್ಗೆ ಅವರಿಗೆ ದೊರಕುವ ಸೌಲಭ್ಯಗಳು ಮತ್ತು ಕುಂದುಕೊರತೆಗಳ ಬಗ್ಗೆ ಗ್ರಾಮ ಮಟ್ಟದಲ್ಲಿ ಮುಕ್ತವಾಗಿ ಚರ್ಚಿಸಿ ಪರಿಹಾರ ಕಂಡುಕೊಳ್ಳಲು ಮಕ್ಕಳ ಗ್ರಾಮ ಸಭೆಗಳು ಪರಿಣಾಮಕಾರಿ ವೇದಿಕೆಗಳಾಗಿರುವುದು ಇದುವರೆಗಿನ ಅನುಭವದಲ್ಲಿ ವೇದ್ಯವಾಗಿದೆ.

ಈ ಹಿನ್ನೆಲೆಯಲ್ಲಿ 2016-17ನೇ ಸಾಲಿನಲ್ಲಿ ಮಕ್ಕಳ ಗ್ರಾಮ ಸಭೆಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ನಡೆಸಲು ಎಲ್ಲಾ ಕ್ರಮಗಳನ್ನು ಕೈಗೊಳ್ಳಲು ತಿಳಿಸಿದೆ. ಮಕ್ಕಳ ಗ್ರಾಮ ಸಭೆಗಳಲ್ಲಿ ಈ ಬಗ್ಗೆ ಮಾಹಿತಿಯುಳ್ಳ ಸ್ಥಳೀಯವಾಗಿ ಲಭ್ಯವಿರುವ ಆರೋಗ್ಯ, ಶಿಕ್ಷಣ ಮತ್ತಿತರ ಕ್ಷೇತ್ರದ ತಜ್ಞರುಗಳನ್ನು ಗ್ರಾಮ ಸಭೆಗಳಿಗೆ ಆಹ್ವಾನಿಸಬಹುದಾಗಿದೆ. ಇವರುಗಳು ಮಕ್ಕಳ ಜೊತೆ ಸಂವಾದ ನಡೆಸಲು ಅವಕಾಶ ಕಲ್ಪಿಸಬಹುದಾಗಿದೆ. ಒಟ್ಟಿನಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆ ಹಾಗೂ ಕುಂದುಕೊರತೆಗಳ ನಿವಾರಣೆಗೆ ಪೂರಕವಾಗುವಂತೆ ಗ್ರಾಮ ಸಭೆಗಳನ್ನು ಏರ್ಪಡಿಸಲು ತಿಳಿಸಿದೆ.

ಗ್ರಾಮ ಸಭೆಗಳು ಪರಿಣಾಮಕಾರಿಯಾಗಿ ನಡೆಯುವಂತಾಗಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಉಪಕಾರ್ಯದರ್ಶಿಗಳು ಹಾಗೂ ಕಾರ್ಯನಿರ್ವಾಹಕಾಧಿಕಾರಿಗಳು ಆಯ್ದ ಗ್ರಾಮ ಸಭೆಗಳಲ್ಲಿ ತಪ್ಪದೇ ಭಾಗವಹಿಸಲು ತಿಳಿಸಿದೆ. ಗ್ರಾಮ ಸಭೆಗಳು ನಡೆದ ಬಗ್ಗೆ ಹಾಗೂ ಅಲ್ಲಿ ವ್ಯಕ್ತವಾದ ವಿಶೇಷ ಅನುಭವಗಳನ್ನು ಸರ್ಕಾರಕ್ಕೆ ವರದಿ ಮಾಡಲು ತಿಳಿಸಿದೆ.

ನಿಮ್ಮ ನಂಬುಗೆಯ,

(ಟಿ.ವಿ. [illegible]ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿ ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ:

1) ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಹಾಧಿಕಾರಿಗಳು.

2) ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.

# ಸುವರ್ಣ ಕರ್ನಾಟಕ 2006

## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 367 ಗ್ರಾಪಂಅ 2006

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 18–9–2006

## ಸುತ್ತೋಲೆ

ವಿಷಯ: ಮಕ್ಕಳ ಹಕ್ಕುಗಳನ್ನು ಕುರಿತು ಪ್ರತಿ ವರ್ಷ ನವೆಂಬರ್ ತಿಂಗಳಿನಲ್ಲಿ "ಮಕ್ಕಳ ಗ್ರಾಮ ಸಭೆ" ಏರ್ಪಡಿಸುವ ಬಗ್ಗೆ.

*****

ವಿಶ್ವ ಸಂಸ್ಥೆಯ ಮಕ್ಕಳ ಹಕ್ಕುಗಳ ಒಡಂಬಡಿಕೆಯನ್ನು ಜಾರಿಗೊಳಿಸಲು ಕೇಂದ್ರ ಸರ್ಕಾರವು 1992ರಲ್ಲಿ ವಿಶ್ವಸಂಸ್ಥೆಗೆ ತನ್ನ ಬದ್ಧತೆಯನ್ನು ವ್ಯಕ್ತಪಡಿಸಿರುತ್ತದೆ. ಮಕ್ಕಳ ಉಳಿವು, ರಕ್ಷಣೆ, ಅಭಿವೃದ್ಧಿ ಮತ್ತು ಭಾಗವಹಿಸುವಿಕೆಯ ಹಕ್ಕುಗಳನ್ನು ಜಾರಿಗೊಳಿಸುವಲ್ಲಿ ಸ್ಥಳೀಯ ಸರ್ಕಾರಗಳಾದ ಗ್ರಾಮಪಂಚಾಯ್ತಿಗಳ ಪಾತ್ರ ಮಹತ್ತರವಾಗಿದೆ. ಗ್ರಾಮ ಪಂಚಾಯ್ತಿಗಳು ನಡೆಸುವ ಗ್ರಾಮ ಸಭೆಗಳಲ್ಲಿ ಮಕ್ಕಳ ಸ್ಥಿತಿಗತಿ ಅವರುಗಳ ಅಭಿವೃದ್ಧಿ ಹಾಗೂ ಅವರುಗಳಿಗೆ ಸಂವಿಧಾನಾತ್ಮಕವಾಗಿ ಒದಗಿಸಿರುವ ಹಕ್ಕುಗಳ ಬಗ್ಗೆ ಗ್ರಾಮ ಪಂಚಾಯ್ತಿಗಳು ವಿಶೇಷವಾಗಿ ಚರ್ಚಿಸಿ ಗ್ರಾಮಸ್ಥರುಗಳಿಗೆ ಅವರುಗಳ ಜವಾಬ್ದಾರಿಯನ್ನು ತಿಳಿಸುವ ಗುರುತರ ಹೊಣೆಗಾರಿಕೆ ಗ್ರಾಮ ಪಂಚಾಯ್ತಿಗಳ ಮೇಲಿರುತ್ತದೆ. ಆದುದರಿಂದ ಪ್ರತಿ ವರ್ಷ ನವೆಂಬರ್ 13ರಿಂದ 30ರವರೆಗೆ ಮಕ್ಕಳ ಹಕ್ಕುಗಳ ಸಪ್ತಾಹವನ್ನು ಹಮ್ಮಿಕೊಳ್ಳುವಂತೆ ಹಾಗೂ ಈ ದಿನಗಳಲ್ಲಿ ವಿಶೇಷವಾಗಿ ಒಂದು ದಿನ ಮಕ್ಕಳ ಹಕ್ಕಿನ ಬಗ್ಗೆ, ಗ್ರಾಮಸ್ಥರು, ಪಾಲಕರು ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಮಕ್ಕಳ ಗ್ರಾಮಸಭೆಗಳನ್ನು ಏರ್ಪಡಿಸಲು ಸರ್ಕಾರ ನಿರ್ಧರಿಸಿರುತ್ತದೆ. ಈ ಗ್ರಾಮ ಸಭೆಯಲ್ಲಿ ವಿಶೇಷವಾಗಿ ಕೆಳಕಂಡ ಅಂಶಗಳನ್ನು ಸಹ ಚರ್ಚಿಸಲು ಸೂಚಿಸಲಾಗಿದೆ.

1) ಮಕ್ಕಳ ಆರೋಗ್ಯಕರ ಬೆಳವಣಿಗೆಗೆ ಪೌಷ್ಟಿಕ ಆಹಾರವನ್ನು ಒದಗಿಸುವುದು.
2) ಮಕ್ಕಳ ಬೌದ್ಧಿಕ ಬೆಳವಣಿಗೆ ಆಟಪಾಟಗಳ ವ್ಯವಸ್ಥೆಯನ್ನು ವೈಜ್ಞಾನಿಕವಾಗಿ ರೂಪಿಸುವುದು.
3) ಪ್ರತಿ 3 ವರ್ಷದಿಂದ 6 ವರ್ಷದ ಎಲ್ಲಾ ಮಕ್ಕಳು ಅಂಗನವಾಡಿ ಹಾಗೂ ಶಾಲೆಗಳಲ್ಲಿ ದಾಖಲಾಗಿ ಶಿಕ್ಷಣವನ್ನು ಪ್ರಾರಂಭಿಸುವುದು.
4) ಜೀತ ಪದ್ಧತಿ ಹಾಗೂ ಕೃಷಿ ಕಾರ್ಮಿಕ ವೃತ್ತಿಯಲ್ಲಿ ಮಕ್ಕಳನ್ನು ತೊಡಗಿಸುವವರ ವಿರುದ್ಧ ಜಾಗೃತಿ ಮೂಡಿಸುವುದು.
5) ಹೆಣ್ಣು ಮಕ್ಕಳ ಪೋಷಣೆ ಹಾಗೂ ರಕ್ಷಣೆ.

ಮೇಲ್ಕಂಡ ಅಂಶಗಳನ್ನಲ್ಲದೆ ಮಕ್ಕಳ ಪರವಾಗಿ ಸರ್ಕಾರ ಅನುಷ್ಠಾನಗೊಳಿಸುತ್ತಿರುವ ಯೋಜನೆಯ ಕಾರ್ಯಕ್ರಮಗಳನ್ನು ವಿವರವಾಗಿ ಚರ್ಚಿಸಿ ಗ್ರಾಮಸ್ಥರು ಹಾಗೂ ಪೋಷಕರುಗಳಿಗೆ ಹೆಚ್ಚಿನ ತಿಳುವಳಿಕೆ ನೀಡುವ ಕಾರ್ಯಕ್ರಮವಾಗಿರಬೇಕು. ಈ ಮಕ್ಕಳ ಹಕ್ಕುಗಳ ವಿಶೇಷ ಗ್ರಾಮಸಭೆಗೆ ಆಯಾ ಗ್ರಾಮಪಂಚಾಯ್ತಿ ವ್ಯಾಪ್ತಿಯ ಮಕ್ಕಳು, ಪೋಷಕರು, ಅಂಗನವಾಡಿ ಕಾರ್ಯಕರ್ತೆಯರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸೂಪರ್‌ವೈಸರ್‌ಗಳು, ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರು, ಎಲ್ಲಾ ಶಾಲಾ ಶಿಕ್ಷಕಿಯರು, ಶಿಕ್ಷಕರು, ಪೋಲೀಸ್ ಅಧಿಕಾರಿಗಳು, ಶಾಲಾ ಅಭಿವೃದ್ಧಿ ಮತ್ತು ಉಸ್ತುವಾರಿ ಸಮಿತಿಯ ಸದಸ್ಯರು, ಸ್ಥಳೀಯ ಸ್ವಯಂಸೇವಾ ಸಂಘಗಳ ಪ್ರತಿನಿಧಿಗಳು ಕಡ್ಡಾಯವಾಗಿ ಹಾಜರಾಗಲು ವ್ಯವಸ್ಥೆ ರೂಪಿಸಬೇಕು.

ಎಲ್ಲಾ ಗ್ರಾಮ ಪಂಚಾಯ್ತಿಗಳು ತಮ್ಮ ವ್ಯಾಪ್ತಿಯಲ್ಲಿರುವ ಮಕ್ಕಳ ಬಗ್ಗೆ ಅಂಕಿಸಂಖ್ಯೆ ಹಾಗೂ ಇನ್ನಿತರೆ ಮಾಹಿತಿಯನ್ನು ಕ್ರೋಢೀಕರಿಸಿಕೊಳ್ಳುವ ವ್ಯವಸ್ಥೆಯನ್ನು ರೂಪಿಸಿಕೊಳ್ಳಬೇಕು. ಎಲ್ಲಾ ಜಿಲ್ಲಾ ಪಂಚಾಯ್ತಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ವೈಯಕ್ತಿಕ ಗಮನಹರಿಸಿ ಮಕ್ಕಳ ಹಕ್ಕುಗಳ ವಿಶೇಷ ಗ್ರಾಮಸಭೆಯನ್ನು ಏರ್ಪಡಿಸಬೇಕೆಂದು ನಿರ್ದೇಶಿಸಲಾಗಿದೆ. ಈ ಬಗ್ಗೆ ಸರ್ಕಾರಕ್ಕೆ ವರದಿಯನ್ನು ಸಲ್ಲಿಸುವಂತೆ ಸೂಚಿಸಲಾಗಿದೆ.

(ಕೆ.ಎಸ್.ಶಾಮಸುಂದರ)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್. ಇಲಾಖೆ.

ಗೆ,

1) ಎಲ್ಲಾ ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯ್ತಿ, *
3) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರ ಮಾಹಿತಿಗಾಗಿ,
4) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಪ್ರಧಾನ ಕಾರ್ಯದರ್ಶಿ ಹಾಗೂ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರಿಗೆ,

* ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು ಈ ಸುತ್ತೋಲೆಯ ಪ್ರತಿಯನ್ನು ತಮ್ಮ ಆಡಳಿತ ವ್ಯಾಪ್ತಿಯ ಗ್ರಾಮಪಂಚಾಯ್ತಿಗಳಿಗೆ ಕಳುಹಿಸಲು ಹಾಗೂ ಪ್ರತಿ ವರ್ಷ ನವೆಂಬರ್ ಮಾಹೆಯಲ್ಲಿ ಮಕ್ಕಳ ಗ್ರಾಮಸಭೆಯನ್ನು ಏರ್ಪಡಿಸಲು ಜವಾಬ್ದಾರರಾಗಿರುತ್ತಾರೆ. ಈ ಬಗ್ಗೆ ಕಾರ್ಯವ್ಯವಸ್ಥೆಯನ್ನು ರೂಪಿಸಿ ಸಂಬಂಧಿಸಿದ ಜಿಲ್ಲಾ ಪಂಚಾಯ್ತಿತಿಗಳ ಮುಖಾಂತರ ಸರ್ಕಾರಕ್ಕೆ ವರದಿ ಕೊಡುವಂತೆ ನಿರ್ದೇಶಿಸಲಾಗಿದೆ.

ಕರ್ನಾಟಕ ಸರ್ಕಾರ

ಸಂ.ಗ್ರಾಅಪ 108 ಗ್ರಾಪಂಅ 2007

ಕರ್ನಾಟಕ ಸರ್ಕಾರದ ಸಚಿವಾಲ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 30-10-

# ಸುತ್ತೋಲೆ

**ವಿಷಯ: ಮಕ್ಕಳ ಗ್ರಾಮ ಸಭೆಯ ರೂಪುರೇಷೆಗಳ ಬಗ್ಗೆ ಮಾರ್ಗಸೂಚಿ.**

* * * * *

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರತಿ ವರ್ಷವೂ ನವೆಂಬರ್ ತಿಂಗಳಲ್ಲಿ ಮಕ್ಕಳ ಹಕ್ಕುಗಳ ಮಾಸಾಚರಣೆ ಹಮ್ಮಿಕೊಳ್ಳಬೇಕಿ ಹಾಗೂ ಈ ತಿಂಗಳಲ್ಲಿ ಒಂದು ದಿನವನ್ನು ಮಕ್ಕಳ ವಿಶೇಷ ಗ್ರಾಮ ಸಭೆ ನಡೆಸಲು ಮೀಸಲಾಗಿಡಬೇಕೆಂದು ಈಗಾ ದಿನಾಂಕ 18.09.2006 ಮತ್ತು 28.08.2007ರ ಸುತ್ತೋಲೆಗಳಲ್ಲಿ ಸರ್ಕಾರವು ಸೂಚನೆ ನೀಡಿದೆ. ಸದರಿ ಗ್ರಾಮ ಸಭೆ ರೂಪುರೇಷೆ ಹಾಗೂ ಅವುಗಳಲ್ಲಿ ಚರ್ಚಿಸಲ್ಪಡಬೇಕಾದ ವಿಷಯಗಳ ಬಗ್ಗೆ ಈ ಕೆಳಕಂಡಂತೆ ಹೆಚ್ಚಿನ ಮಾಗದರ್ಶ ನೀಡಲಾಗಿದೆ.

ಮಕ್ಕಳ ಗ್ರಾಮ ಸಭೆಯು ಮಕ್ಕಳಿಗೆ ತಮ್ಮ ಸಂರಕ್ಷಣೆಯ ಹಕ್ಕು, ಸವಲತ್ತು ಮತ್ತು ವ್ಯವಸ್ಥೆಯ ಹಕ್ಕು ಮತ್ತು ಕುಂ ಕೊರತೆಗಳನ್ನು ಹೇಳಿಕೊಳ್ಳುವ ಹಾಗೂ ತಮ್ಮ ಬಗ್ಗೆ ತೀರ್ಮಾನವಾಗುವ ವಿಷಯಗಳ ಬಗ್ಗೆ ಚರ್ಚಿಸುವ ಸಲುವಾ ಸ್ಥಳೀಯ ಸರ್ಕಾರದ ಮಟ್ಟದಲ್ಲಿ ನಡೆಯುವ ಸಭೆಗಳಲ್ಲಿ ಸಕ್ರೀಯವಾಗಿ ಭಾಗವಹಿಸಲು ಕಲ್ಪಿಸಲಾಗುವ ಒಂದು ವೇದಿ ಇದರ ಹೆಚ್ಚಿನ ಮಾರ್ಗದರ್ಶನ ನೀಡಲಾಗಿದೆ.

- ಮಕ್ಕಳಿಗೆ ಸಂಬಂಧಪಟ್ಟ ಮಾಹಿತಿ, ಸಮಸ್ಯೆಗಳನ್ನು ಮಕ್ಕಳಿಂದಲೇ ತಿಳಿದುಕೊಳ್ಳುವುದು.
- ಸರ್ಕಾರದ ವಿವಿಧ ಇಲಾಖೆಗಳು ಮಕ್ಕಳ ಬಗ್ಗೆ ಕಾರ್ಯಗತಗೊಳಿಸುತ್ತಿರುವ ವಿವಿಧ ಕಾರ್ಯಕ್ರಮಗಳನ ಮಕ್ಕಳಿಗೆ ಪರಿಚಯಿಸುವುದು.
- ಮಕ್ಕಳು ಸಂಘಟಿತರಾಗಿ ತಮಗಿರುವ ಹಕ್ಕುಗಳ ಬಗ್ಗೆ ತಿಳಿದುಕೊಂಡು, ತಮಗಿರುವ ಎಲ್ಲಾ ಹಕ್ಕುಗಳನ ಬಳಸಿಕೊಳ್ಳುವಲ್ಲಿ ಜಾಗೃತಿ ಉಂಟು ಮಾಡುವುದು.
- ಬರುವ ಸಮಸ್ಯೆಗಳನ್ನು, ಆ ಬಗ್ಗೆ ತಮ್ಮ ಆಲೋಚನೆಗಳನ್ನು, ಅಭಿಪ್ರಾಯಗಳನ್ನು ಗ್ರಾಮ ಪಂಚಾಯತಿಯ ಹಿರಿಯರೊಂದಿಗೆ ಹಂಚಿಕೊಳ್ಳಲು, ಚರ್ಚೆಯ ಮೂಲಕವಾಗಿ ಪರಿಹಾರ ಕಂಡುಕೊಳ್ಳಲು ಅವಕಾಶ ಮಾಡಿಕೊಡುವುದು.
- ತಮ್ಮ ಪರಿಸರದಲ್ಲಿ ನಡೆಯುವ ನ್ಯಾಯ ಅನ್ಯಾಯಗಳನ್ನು ಗುರುತಿಸಿ, ಅವುಗಳ ಬಗ್ಗೆ ತಮ್ಮದೇ ಅಭಿಪ್ರಾಯಗಳನ್ನು ವ್ಯಕ್ತಪಡಿಸಲು ಹಾಗೂ ವಯಸ್ಕರಾದಾಗ ಗ್ರಾಮ ಸಭೆಯಲ್ಲಿ ಸಕ್ರೀಯವಾಗಿ ಭಾಗವಹಿಸಲು ಬಾಲ್ಯದಿಂದಲೇ ತಯಾರಿ ನೀಡುವುದು.

**ಮಕ್ಕಳ ಗ್ರಾಮ ಸಭೆಯ ದಿನಾಂಕ, ಸ್ಥಳ ಮತ್ತು ಸಮಯ ನಿಗದಿ**

- ನವೆಂಬರ್-ಡಿಸೆಂಬರ್ ತಿಂಗಳಲ್ಲಿ ಮಕ್ಕಳ ಮಾಸಾಚರಣೆ ಹಮ್ಮಿಕೊಂಡು, ಈ ಅವಧಿಯಲ್ಲಿ ಒಂದು ದಿನವನ್ನು ಮಕ್ಕಳ ಗ್ರಾಮ ಸಭೆ ನಡೆಸಲು ಗ್ರಾಮ ಪಂಚಾಯತಿಯು ನಿಗದಿಪಡಿಸಬೇಕು.
- ಮಕ್ಕಳ ಗ್ರಾಮ ಸಭೆಗೆ ಪೂರ್ವ ತಯಾರಿ ನಡೆಸಲು ಮಕ್ಕಳಿಗೆ ಸೂಕ್ತ ಮಾರ್ಗದರ್ಶನ ಹಾಗೂ ಸಮಯಾವಕಾಶ ನಿಗದಿಗೊಳಿಸಬೇಕು.
- ಸಭೆ ನಿಗದಿಗೊಳಿಸುವ ಮೊದಲು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಶಾಲೆಗಳ ಮುಖ್ಯೋಪಾಧ್ಯಾಯರುಗಳ ಮುಖಾಂತರ ಒಬ್ಬ ಶಿಕ್ಷಕ/ಶಿಕ್ಷಕಿಯನ್ನು ಸಮನ್ವಯಾಧಿಕಾರಿಯನ್ನಾಗಿ ನೇಮಿಸಿ ಮಕ್ಕಳ ಜೊತೆ ಪೂರ್ವಭಾವಿ ಸಭೆಯನ್ನು ಶಾಲಾ ಮಟ್ಟದಲ್ಲಿ ನಡೆಸಿ ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳ ಬಗ್ಗೆ ಮಾಹಿತಿಯನ್ನು ದಿನಾಂಕ 17.11.2007ರೊಳಗಾಗಿ ಗ್ರಾಮ ಪಂಚಾಯತಿಗೆ ನೀಡತಕ್ಕದ್ದು.
- ಗ್ರಾಮ ಪಂಚಾಯತಿ ಅಧ್ಯಕ್ಷರು/ಕಾರ್ಯದರ್ಶಿ/ನೋಡಲ್ ಅಧಿಕಾರಿಯವರು ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳ ಬಗ್ಗೆ ಕಾರ್ಯಸೂಚಿ ಸಿದ್ಧಪಡಿಸಿ, ಎಲ್ಲ ಶಾಲೆಗಳಿಗೆ ಹಾಗೂ ಮಕ್ಕಳ ಒಳಿತಿಗಾಗಿ ಕಾರ್ಯನಿರ್ವಹಿಸುತ್ತಿರುವ ಸಂಘಸಂಸ್ಥೆಗಳಿಗೆ ಕನಿಷ್ಠ 3 ದಿನಗಳ ಒಳಗೆ ತಿಳಿಸತಕ್ಕದ್ದು.
- ಗ್ರಾಮ ಪಂಚಾಯತಿಗಳಿಗೆ ಎಲ್ಲಾ ಶಾಲೆಗಳಿಂದ ಈ ಮಾಹಿತಿ ಬಂದ ನಂತರ ದಿನಾಂಕ 27.11.2007ರ ಒಳಗೆ ಮಕ್ಕಳ ಗ್ರಾಮ ಸಭೆಯನ್ನು ಕಡ್ಡಾಯವಾಗಿ ನಡೆಸಲು ಕ್ರಮ ವಹಿಸತಕ್ಕದ್ದು.

- ಈ ಮಕ್ಕಳ ಗ್ರಾಮ ಸಭೆಯಲ್ಲಿ ತೆಗೆದುಕೊಂಡ ನಿರ್ಣಯ ಕುರಿತು ಗ್ರಾಮ ಪಂಚಾಯತಿ ಕಾರ್ಯದರ್ಶಿ ಹಾಗೂ ನೋಡಲ್ ಅಧಿಕಾರಿಗಳು ಒಂದು ವಾರದೊಳಗಾಗಿ ಕ್ರಮ ಜರುಗಿಸಿ ಮತ್ತು ದಿನಾಂಕ 08.12.2007ರ ಒಳಗಾಗಿ ಮತ್ತೊಮ್ಮೆ ಮಕ್ಕಳ ಗ್ರಾಮ ಸಭೆ ನಡೆಸಿ, ಅನುಪಾಲನಾ ವರದಿ ಮಂಡಿಸತಕ್ಕದ್ದು.

ನಿರ್ದಿಷ್ಟ ಸಮಯದಲ್ಲಿ ಗ್ರಾಮ ಪಂಚಾಯತಿಯು ಸಭೆ ಕರೆಯದಿದ್ದಲ್ಲಿ, ಸಂಬಂಧಪಟ್ಟ ಗ್ರಾಮ ಪಂಚಾಯತಿ ಕಾರ್ಯದರ್ಶಿ ಮತ್ತು ಗ್ರಾಮ ಪಂಚಾಯ್ತಿಯ ನೋಡಲ್ ಅಧಿಕಾರಿಯನ್ನು ಜವಾಬ್ದಾರರನ್ನಾಗಿಸಿ, ಈ ಬಗ್ಗೆ ತಾಲ್ಲೂಕು ಪಂಚಾಯತಿಯ ಕಾರ್ಯ ನಿರ್ವಹಣಾಧಿಕಾರಿಗಳು ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗೆ ವರದಿ ನೀಡತಕ್ಕದ್ದು.

ಮಕ್ಕಳ ಗ್ರಾಮ ಸಭೆಗೆ ಪೂರ್ವ ತಯಾರಿ

- ಮಕ್ಕಳ ಗ್ರಾಮ ಸಭೆಯ ದಿನಾಂಕವನ್ನು ನಿಗದಿಪಡಿಸಿ, ಎಲ್ಲಾ ಶಾಲೆಗಳಲ್ಲಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಪೋಸ್ಟರ್ ಅಂಟಿಸುವ ಮೂಲಕ, ಡಂಗುರ ಹೊಡೆಸುವ ಹಾಗೂ ಕರಪತ್ರಗಳನ್ನು ಹಂಚುವ ಮೂಲಕ ಪ್ರಚಾರ ಮಾಡಬೇಕು.
- ಆಯಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಮಕ್ಕಳ ಸ್ಥಿತಿಗತಿ ಕುರಿತು ನಿಗದಿತ ನಮೂನೆಯಲ್ಲಿ ಮಾಹಿತಿ ಸಂಗ್ರಹಿಸಿ, ಅದನ್ನು ಭಿತ್ತಿಪತ್ರದ ಮೂಲಕ ಪಂಚಾಯಿತಿ ಕಛೇರಿ, ಶಾಲೆ, ಅಂಗನವಾಡಿ ಇತ್ಯಾದಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಅಂಟಿಸಿ ಪ್ರಚಾರ ನೀಡಬೇಕು.
- ಸಭೆಯಲ್ಲಿ ಭಾಗವಹಿಸಲಿರುವ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಎಲ್ಲಾ ಮಕ್ಕಳು ಬಂದು ಹೋಗಲು ಅನುಕೂಲವಿರುವ ಜಾಗ, ಸದರಿ ಜಾಗದಲ್ಲಿ ಮಕ್ಕಳಿಗೆ ಕುಳಿತುಕೊಳ್ಳಲು ಅವಶ್ಯ ಸ್ಥಳಾವಕಾಶ, ಕುಡಿಯುವ ನೀರು, ಶೌಚಾಲಯ ಸೌಲಭ್ಯ, ಪ್ರಥಮ ಚಿಕಿತ್ಸೆ ಮತ್ತು ತುರ್ತು ಅಗತ್ಯಕ್ಕೆ ವಾಹನ ವ್ಯವಸ್ಥೆ, ಸಾಕಷ್ಟು ಗಾಳಿ ಬೆಳಕಿನ ವ್ಯವಸ್ಥೆ ಇರುವುದನ್ನು ಖಚಿತಪಡಿಸಿಕೊಳ್ಳಬೇಕು.
- ವಾಹನ ಸಂಚಾರದ ಅತಿಯಾದ ದಟ್ಟಣೆ, ವಿದ್ಯುತ್ ಟ್ರಾನ್ಸ್‌ಫಾರ್ಮರ್, ಬೀದಿದೀಪಗಳ ತೆರೆದ ಸ್ವಿಚ್‌ಗಳು, ತೆರೆದಬಾವಿಗಳು, ಸಮೀಪದಲ್ಲಿ ಕೆರೆ, ಹೊಂಡ ನದಿಗಳು ಇಲ್ಲದಂತೆ, ಇದ್ದರೂ ಅವುಗಳ ಸಮೀಪ ಮಕ್ಕಳು ಹೋಗದಂತೆ ಸೂಕ್ತ ರಕ್ಷಣೆ ಒದಗಿಸಬೇಕು.
- ಹಬ್ಬ, ಮಕ್ಕಳ ಪರೀಕ್ಷೆಗಳ ಅಕ್ಕಪಕ್ಕದ ದಿನಾಂಕಗಳಂದು ಮಕ್ಕಳ ಗ್ರಾಮ ಸಭೆ ನಿಗದಿಗೊಳಿಸಬಾರದು.
- ಮಕ್ಕಳ ಗ್ರಾಮ ಸಭೆಯ ಬಗ್ಗೆ ಸಾರ್ವಜನಿಕರ ಗಮನ ಸೆಳೆಯಲು ಮಕ್ಕಳು ನಿಗದಿಯಾದ ರಸ್ತೆಯಲ್ಲಿ ಮೆರವಣಿಗೆಯ ಮೂಲಕ ಬರಬೇಕು. ಹಾಗೂ ದಾರಿಯುದ್ದಕ್ಕೂ ಇತರ ಮಕ್ಕಳನ್ನು ಜೊತೆಗೆ ಸೇರಿಸಿಕೊಳ್ಳಬೇಕು ಹಾಗೂ ಸಮಸ್ಯೆಗಳನ್ನೊಳಗೊಂಡ ಚೀಟಿಗಳನ್ನು ಸಮಸ್ಯಾ ಚೀಲಗಳಲ್ಲಿ/ಡಬ್ಬಗಳಲ್ಲಿ ಸಂಗ್ರಹಿಸಿ, ಗ್ರಾಮ ಸಭೆಯಲ್ಲಿ ಆ ಚೀಲ/ಡಬ್ಬವನ್ನು ಸುರುವಿ, ಸದರಿ ಸಮಸ್ಯೆಗಳ ಬಗ್ಗೆ ಹಿರಿಯರ ಗಮನ ಸೆಳೆಯಬಹುದು.
- ಮಕ್ಕಳು ಬರುವ ದಾರಿಯಲ್ಲಿ ಮಕ್ಕಳ ಸುರಕ್ಷತೆಗೆ ಸೂಕ್ತ ವ್ಯವಸ್ಥೆ ಮಾಡಿಕೊಳ್ಳತಕ್ಕದ್ದು.
- ಮಕ್ಕಳು ತಾವು ಗ್ರಾಮ ಸಭೆಯಲ್ಲಿ ಹೇಳಬೇಕಾದ ವಿಷಯಗಳನ್ನು ಸಂಗ್ರಹಿಸಲು, ಅವುಗಳನ್ನು ಸಭೆಯಲ್ಲಿ ಮಂಡಿಸಲು ತಯಾರಿ ಮಾಡಲು ವ್ಯವಸ್ಥೆ ಮಾಡಬೇಕು.
- ಮಕ್ಕಳು ತಮ್ಮ ಹಕ್ಕುಗಳು, ಸಮಸ್ಯೆಗಳ ಹಾಗೂ ತಮ್ಮಲ್ಲಿನ ಕಲೆಗಳ ಪ್ರತಿಭೆಗಳನ್ನು ವ್ಯಕ್ತಪಡಿಸಲು ಅಗತ್ಯವಾದ ಪೋಸ್ಟರ್, ಬ್ಯಾನರ್, ಚಿತ್ರ, ಹಾಡು ಕಥೆಗಳನ್ನು ರಚಿಸಲು, ಕಲಾಭಿನಯ ಪ್ರದರ್ಶಿಸಲು ನೆರವು ನೀಡಬೇಕು.

ಮಕ್ಕಳ ಗ್ರಾಮ ಸಭೆಯಲ್ಲಿ ನಡೆಸಬೇಕಾದ ಕಾರ್ಯಕ್ರಮಗಳು

- ಗ್ರಾಮ ಪಂಚಾಯಿತಿಯ ಅಧ್ಯಕ್ಷರು ಹಾಗೂ ಎಲ್ಲಾ ಸದಸ್ಯರು ಸಭೆಯಲ್ಲಿ ತಪ್ಪದೆ ಹಾಜರಿರಬೇಕು, ಸಭೆಯ ಆರಂಭದಲ್ಲಿ ಸರ್ವಧರ್ಮ ಸಮನ್ವಯಗಳನ್ನು ಸಾರುವ ಅಥವಾ ದೇಶಭಕ್ತಿ, ನಾಡಗೀತೆ ಮತ್ತು ರಾಷ್ಟ್ರಗೀತೆ, ಪ್ರಕೃತಿಯ ಬಗ್ಗಿನ ಹಾಡುಗಳನ್ನು ಹಾಡಬೇಕು.
- ಮಕ್ಕಳು ಸಭೆಯಲ್ಲಿ ಹೇಳಬೇಕಾದ ವಿಷಯಗಳನ್ನು ಸಭೆಯಲ್ಲಿ ಮಂಡಿಸಲು ಕಾರ್ಯಸೂಚಿಯನ್ವಯ ಅವಕಾಶ ನೀಡಬೇಕು.
- ಮಕ್ಕಳು ತಮ್ಮ ಸಮಸ್ಯೆಗಳ ಬಗ್ಗೆ ರಚಿಸಿದ ಪೋಸ್ಟರ್, ಬ್ಯಾನರ್, ಚಿತ್ರ ಇತ್ಯಾದಿಗಳನ್ನು ಪ್ರದರ್ಶಿಸಲು ಅವಕಾಶ ನೀಡಬೇಕು.
- ಮಕ್ಕಳು ತಮ್ಮ ಸಮಸ್ಯೆಗಳ ಬಗ್ಗೆ ಕೇಳುವ ವಿವರಗಳು, ಅವುಗಳ ಸುಧಾರಣೆಗಾಗಿ ಸಂಪರ್ಕಿಸಬೇಕಾದ ಇಲಾಖೆಯ ಅಧಿಕಾರಿಯ ಹೆಸರು, ಸಂಪರ್ಕಿಸಬಹುದಾದ ವಿಳಾಸ ದೂರವಾಣಿ ಸಂಖ್ಯೆ ಇತ್ಯಾದಿ ವಿವರಗಳನ್ನು ಆಯಾ ಇಲಾಖೆಗೆ ಸಂಬಂಧಿಸಿದ ಪ್ರತಿನಿಧಿಗಳು ಮಕ್ಕಳ ಗ್ರಾಮ ಸಭೆಯಲ್ಲಿ ಖುದ್ದಾಗಿ ಹಾಜರಿದ್ದು ಒದಗಿಸಬೇಕು.

- ಸರ್ಕಾರದ ವಿವಿಧ ಇಲಾಖೆಯ ಪ್ರತಿನಿಧಿಗಳು ತಂತಮ್ಮ ಇಲಾಖೆಗಳಲ್ಲಿ ಮಕ್ಕಳಿಗೆ ಸಂಬಂಧಪಟ್ಟ ಕ ವಿವರ, ಮಕ್ಕಳು ಕೇಳುವ ಪ್ರಶ್ನೆಗಳಿಗೆ ಸೂಕ್ತ ಮಾಹಿತಿ ನೀಡಬೇಕು.

ಗ್ರಾಮ ಪಂಚಾಯತಿ ಅಧ್ಯಕ್ಷರ ಕರ್ತವ್ಯಗಳು

- ಮಕ್ಕಳೇ ಆರಿಸಿರುವ ಅವರ ಪ್ರತಿನಿಧಿಗಳನ್ನು ವೇದಿಕೆಯಲ್ಲಿ ನಿರ್ಭಯವಾಗಿ ಭಾಗವಹಿಸುವಂತೆ ಮ
- ಸಮುದಾಯದ ಯಾವುದೇ ವಯಸ್ಕರು ಮಕ್ಕಳ ಮೇಲೆ ಒತ್ತಡ ಹೇರಿ ತಮ್ಮ ಉದ್ದೇಶಕ್ಕೆ ಮಕ್ಕಳನ್ನು ಬಳಸಿ ನೋಡುವುದು.
- ಪಂಚಾಯತಿ ವ್ಯಾಪ್ತಿಯ ಎಲ್ಲಾ ವರ್ಗದ/ಸಮುದಾಯದ ಮಕ್ಕಳು ಸಭೆಯಲ್ಲಿ ಭಾಗವಹಿಸುವಂತೆ ನೋ
- ಅವರೆಲ್ಲರೂ ಸಭೆಯ ಮುಂದಿನ ಸಾಲುಗಳಲ್ಲಿ ಕುಳಿತುಕೊಳ್ಳಲು ಅನುವು ಮಾಡಿಕೊಡುವುದು
- ಯಾವುದೇ ಅಡ್ಡಿ ಆತಂಕ ಬಾರದಂತೆ ಎಚ್ಚರಿಕೆಯಿಂದ ಸಭೆ ನಿರ್ವಹಿಸಬೇಕು.

ಗ್ರಾಮ ಪಂಚಾಯತಿ ಸದಸ್ಯರ ಕರ್ತವ್ಯ

- ಮಕ್ಕಳ ಗ್ರಾಮ ಸಭೆಯಲ್ಲಿ ಸಕ್ರಿಯವಾಗಿ ಪಾತ್ರ ವಹಿಸುವುದು.
- ಸಭೆಗೆ ಮುಂಚಿತವಾಗಿ ತಮ್ಮ ಗ್ರಾಮದಲ್ಲಿ ಮಕ್ಕಳು ಒಂದೆಡೆ ಸೇರುವ ಎಲ್ಲಾ ಜಾಗಗಳಿಗೆ ಭೇಟಿ ನೀಡಿ ತಯಾರಿಗೆ ಅವಶ್ಯ ಮಾಹಿತಿ ನೀಡುವುದು.
- ಮಕ್ಕಳು ತಮ್ಮ ಸಮಸ್ಯೆಗಳನ್ನು ಗ್ರಾಮ ಸಭೆಯಲ್ಲಿ ಮಂಡಿಸಲು ಪ್ರೋತ್ಸಾಹಿಸುವುದು.
- ಮಕ್ಕಳ ಗ್ರಾಮ ಸಭೆಯಲ್ಲಿ ಭಾಗವಹಿಸಲು ಮಕ್ಕಳಿಗೆ ತೊಂದರೆಗಳಿದ್ದಲ್ಲಿ ಅವುಗಳನ್ನು ನಿವಾರಿಸಲು ನೀಡುವುದು.
- ಮಕ್ಕಳ ಮೆರವಣಿಗೆಯಲ್ಲಿ ಜೊತೆಗಿರುವುದು.

ಗ್ರಾಮ ಪಂಚಾಯತಿ ಕಾರ್ಯದರ್ಶಿಯ ಕರ್ತವ್ಯಗಳು

- ಗ್ರಾಮ ಸಭೆಯ ದಿನ ಮತ್ತು ವೇಳೆ ನಿಗದಿಗೊಳಿಸುವುದಕ್ಕೆ ಸಂಬಂಧಿಸಿದಂತೆ ಕ್ರಮ ವಹಿಸುವುದು.
- ಅವುಗಳನ್ನು ಸಾಕಷ್ಟು ಮುಂಚಿತವಾಗಿ ಸಭೆಯ ದಿನದ ತನಕ ಪದೇಪದೇ ಪ್ರಚಾರ ಮಾಡಲು ವ್ಯ ಮಾಡುವುದು.
- ಹಿಂದಿನ ಮಕ್ಕಳ ಗ್ರಾಮ ಸಭೆಯಲ್ಲಿ ಮಕ್ಕಳು ಎತ್ತಿದ ಸಮಸ್ಯೆಗಳ ಬಗ್ಗೆ ಪಂಚಾಯತಿಯು ಕೈಗೊಂಡ ಕ್ರಮ ವಿವರಗಳನ್ನು ಸಿದ್ಧಪಡಿಸಿ ಸಭೆಯ ಮುಂದಿಡುವುದು.
- ಕಾರ್ಯಕ್ರಮದ ನಿರ್ವಹಣೆ
- ಎಲ್ಲಾ ಮಕ್ಕಳು ಅದರಲ್ಲೂ ವಿಶೇಷವಾಗಿ ಬದಿಗೊತ್ತಲ್ಪಟ್ಟ ಸಮುದಾಯದ ಮಕ್ಕಳು ತಮ್ಮ ಸಮಸ್ಯೆಗಳ ಧೈರ್ಯವಾಗಿ ಸಭೆಯಲ್ಲಿ ಹೇಳಿಕೊಳ್ಳಲು ಅನುವು ಮಾಡಿಕೊಡುವುದು.

ತಾಲ್ಲೂಕು ಪಂಚಾಯತಿ ಕಾರ್ಯ ನಿರ್ವಹಣಾಧಿಕಾರಿಯ ಕರ್ತವ್ಯಗಳು

- ಗ್ರಾಮ ಪಂಚಾಯಿತಿ ಅಧ್ಯಕ್ಷರ ಹಾಗೂ ಕಾರ್ಯದರ್ಶಿಗಳೊಡನೆ ಸಮಾಲೋಚಿಸಿ, ತಾಲ್ಲೂಕಿನ ಎಲ್ಲಾ ಗ್ರಾ ಪಂಚಾಯಿತಿಗಳಲ್ಲಿ ಮಕ್ಕಳ ಗ್ರಾಮ ಸಭೆ ನಡೆಸಲು ಅವಧಿಯನ್ನು ಗುರುತಿಸಿಕೊಳ್ಳುವುದು.
- ಮಕ್ಕಳ ಗ್ರಾಮ ಸಭೆಯ ಬಗ್ಗೆ ಸಾಕಷ್ಟು ಮುಂಚಿತವಾಗಿ ಪ್ರಕಟಪಡಿಸಿ, ಮಕ್ಕಳ ಗ್ರಾಮ ಸಭೆಯಲ್ಲಿ ಪಾಲ್ಗೊಳ್ಳು ಬಗ್ಗೆ ಎಲ್ಲಾ ಇಲಾಖೆಗಳಿಗೆ ಸಂಬಂಧಿಸಿದ ತಾಲ್ಲೂಕು ಮಟ್ಟದ ಅಧಿಕಾರಿಗಳ ಸಭೆ ಕರೆಯುವುದು.
- ಗ್ರಾಮ ಪಂಚಾಯಿತಿ ಮಟ್ಟಕ್ಕೆ ಅಗತ್ಯವಿರುವ ಮಾಹಿತಿಗಳನ್ನು ಪಂಚಾಯಿತಿ ಮಟ್ಟದ ಇಲಾಖೆಗಳ ನೌಕರರಿ ಒದಗಿಸುವುದು
- ಇದಕ್ಕಾಗಿ ಪ್ರತಿ ಗ್ರಾಮ ಪಂಚಾಯಿತಿಗೆ ಒಬ್ಬ ಮಾರ್ಗದರ್ಶಕ ಅಧಿಕಾರಿಯನ್ನು ನೇಮಿಸುವುದು.

ಮಾರ್ಗದರ್ಶಕ ಅಧಿಕಾರಿಯ ಕರ್ತವ್ಯ

- ತಮಗೆ ಸಂಬಂಧಿಸಿದ ಗ್ರಾಮ ಪಂಚಾಯಿತಿ ಕಾರ್ಯದರ್ಶಿಯೊಡನೆ ಮಕ್ಕಳ ಗ್ರಾಮ ಸಭೆಗಿಂತ ಒಂದು ವಾರ ಮುಂಚಿತವಾಗಿ ಸಂಪರ್ಕಿಸಿ ಗ್ರಾಮ ಸಭೆಯ ಪೂರ್ವ ತಯಾರಿಕೆಯನ್ನು ಖಾತ್ರಿಪಡಿಸಿಕೊಳ್ಳುವುದು.
- ಅಗತ್ಯವಾದ ಮಾರ್ಗದರ್ಶನ ನೀಡುವುದು
- ಮಕ್ಕಳ ಗ್ರಾಮ ಸಭೆ ಆದ ಬಗ್ಗೆ ಒಂದು ವಾರದೊಳಗೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗೆ ವಿವರವಾದ ವರದಿ ನೀಡುವುದು.

ಮಕ್ಕಳ ಗ್ರಾಮ ಸಭೆ ಕಾರ್ಯಕ್ರಮಗಳನ್ನು ಪ್ರತಿ ಗ್ರಾಮ ಪಂಚಾಯಿತಿಯು ತಪ್ಪದೆ ವೀಡಿಯೋ ಚಿತ್ರೀಕರಣ ಮಾಡಿ ಸಿ.ಡಿ.ಯನ್ನು ಕಾರ್ಯನಿರ್ವಹಣಾಧಿಕಾರಿಗಳಿಗೆ ಸಲ್ಲಿಸತಕ್ಕದ್ದು.

ಎಲ್ಲಾ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು ತಮ್ಮ ಜಿಲ್ಲೆಗಳ ವ್ಯಾಪ್ತಿಯಲ್ಲಿನ ಪ್ರತಿ ಗ್ರಾಮ ಪಂಚಾಯಿತಿಯಿಂದ ಮಕ್ಕಳ ಗ್ರಾಮ ಸಭೆ ಬಗ್ಗೆ ತಾಲ್ಲೂಕುವಾರು ವರದಿ ಪಡೆದು ಕ್ರೋಢೀಕರಿಸಿ ವಿಡಿಯೋ ಚಿತ್ರಿಕರಣಕ್ಕೆ ಸಂಬಂಧಿಸಿದಂತೆ, ಒಂದು ಸಿ.ಡಿ.ಯನ್ನು ತಯಾರಿಸಿ ಒಂದು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಸಹಿ/–
(ಬಿ. ವೀರಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿ:
1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತ್‌ಗಳ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ **ಅಧಿಕಾರಿಗಳು** – ಈ ಸುತ್ತೋಲೆಯ ಪ್ರತಿಯನ್ನು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳ ಗಮನಕ್ಕೆ ತರುವಂತೆ ಸೂಚಿಸಲಾಗಿದೆ.
3. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಬೆಂಗಳೂರು – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು